ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

ಉಪನಿರ್ದೇಶಕರ ಕಚೇರಿ, ವಿಕಾಸಭವನ ಆವರಣ, ಲೋಕಸಭಾ ಸದಸ್ಯರ ಕಚೇರಿ ಹತ್ತಿರ, ಕಲಬುರಗಿ–585102

ದೂರವಾಣಿ: 08472–223133 ಫ್ಯಾಕ್ಸ್: 08472–223133 ಇ–ಮೇಲ್: varthabhavangulbarga2008@gmail.com

**website:** http://groups.google.com/group/varthabhavangulbarga2008 **Facebook:** Gulbargavarthe **Blogger:** Gulbargavarthe

**18ನೇ ಮಾರ್ಚ್ 2017**

# ಸಮಾಜಮುಖಿ ಶಿಕ್ಷಣ ಒದಗಿಸುವಲ್ಲಿ ವಿಶ್ವವಿದ್ಯಾಲಯಗಳ ಪಾತ್ರ ಹಿರಿದು



ಕಲಬುರಗಿ,ಮಾ.18. – ಸಮಾಜದಲ್ಲಿ ಸಮಾನತೆ ಮತ್ತು ಸಾಮಾಜಿಕ ನ್ಯಾಯ ಕಲ್ಪಿಸಲು ಅನುವಾಗುವಂತೆ ಮಾನವೀಯ ಮತ್ತು ವೈಚಾರಿಕ ಮೌಲ್ಯಗಳನ್ನು ಬೆಳೆಸುವ ಸಮಾಜಮುಖಿ ಶಿಕ್ಷಣ ಒದಗಿಸುವ ನಿಟ್ಟಿನಲ್ಲಿ ವಿಶ್ವವಿದ್ಯಾಲಯಗಳು ಪಾತ್ರ ಹಿರಿದಾಗಿದೆ ಎಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಅವರು ಶನಿವಾರ ಗುಲಬರ್ಗಾ ವಿಶ್ವವಿದ್ಯಾಲಯದಿಂದ ಆಯೋಜಿಸಿರುವ ಸಮುದಾಯ ಭವನ, ವಸತಿ ನಿಲಯ ಮತ್ತು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಅಧ್ಯಯನ ಪೀಠ ಹಾಗೂ ಪರಿಹಾರಿಕ ಬೋಧನಾ ಕೇಂದ್ರ ಕಟ್ಟಡದ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಎಲ್ಲರಿಗೂ ಉನ್ನತ ಶಿಕ್ಷಣ ಸಿಕ್ಕಾಗ ಮಾತ್ರ ಸಮಾನತೆ ತರಲು ಸಾಧ್ಯ. ನಮ್ಮ ಸಮಾಜಕ್ಕೆ ಕಂಟಕಪ್ರಾಯವಾಗಿರುವ ಜಾತಿ ವ್ಯವಸ್ಥೆಯಿಂದ ಆರ್ಥಿಕ ಮತ್ತು ಸಾಮಾಜಿಕ ಅಸಮಾನತೆಯ ದೊಡ್ಡ ಕಂದಕ ನಿರ್ಮಾಣವಾಗಿದೆ. ಶಿಕ್ಷಣ ಸಂಸ್ಕೃತಿಯಿಂದ, ಆರ್ಥಿಕ ಮತ್ತು ಸಾಮಾಜಿಕ ಸಮಾನತೆಯಿಂದ ವಂಚಿತರಾದವರು ಹಿಂದುಳಿಯುವಿಕೆಗೆ ಪ್ರಮುಖ ಕಾರಣವಾಗಿದೆ. ಇದಕ್ಕಾಗಿ ಐತಿಹಾಸಿಕ

ಕಾರಣಗಳಿಂದ ಹಿಂದುಳಿದಿರುವ ಹೈದ್ರಾಬಾದ ಕರ್ನಾಟಕ ಪ್ರದೇಶದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡುವುದು ಅವಶ್ಯಕವಾಗಿದೆ ಎಂದರು.

ಆಂಧ್ರ ಪ್ರದೇಶ ಮತ್ತು ಕರ್ನಾಟಕ ರಾಜ್ಯಗಳು ಸಾಂಸ್ಕೃತಿಕವಾಗಿ ನಿಕಟ ಸಂಬಂಧ ಹೊಂದಿದ್ದು, ಈ ರಾಜ್ಯಗಳಲ್ಲಿ ಅನೇಕ ದಾರ್ಶನಿಕರು, ಶರಣರು, ದಾಸರು, ಸೂಫಿ ಸಂತರು, ಮನುಕುಲದ ಉದ್ಧಾರಕ್ಕಾಗಿ ಮತ್ತು ಸಮಾನತೆ ಹಾಗೂ ಸಾಮಾಜಿಕ ನ್ಯಾಯಕ್ಕಾಗಿ ಶ್ರಮಿಸಿದ್ದು, ಎಲ್ಲರಿಗೂ ಆದರ್ಶಪ್ರಾಯವಾಗಿದ್ದಾರೆ. ಇಂತಹವರಲ್ಲಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಅವರೂ ಒಬ್ಬರು. ಸಚ್ಚಾರಿತ್ರ್ಯ ಮತ್ತು ಸಾಮಾಜಿಕ ಕಳಕಳಿ ಹೊಂದಿದ ಹೇಮರಡ್ಡಿ ಮಲ್ಲಮ್ಮ ಇಡೀ ಸಮಾಜಕ್ಕಾಗಿ ತಮ್ಮ ಬದುಕನ್ನೇ ಸಮರ್ಪಿಸಿಕೊಂಡವರು. ಅವರ ಜೀವನ, ಸಾಧನೆ ಮತ್ತು ಚಿಂತನೆಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಹಿನ್ನೆಲೆಯಲ್ಲಿ ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಹೇಮರಡ್ಡಿ ಮಲ್ಲಮ್ಮ ಅಧ್ಯಯನ ಪೀಠ ಸ್ಥಾಪಿಸಿರುವುದು ಸ್ತುತ್ಯಾರ್ಹ. ಈ ಅಧ್ಯಯನ ಪೀಠ ಸೇರಿದಂತೆ ಎಲ್ಲ ಅಧ್ಯಯನ ಪೀಠಗಳು ಅಧ್ಯಯನ ಮತ್ತು ಸಂಶೋಧನಾ ಕಾರ್ಯವನ್ನು ನಿರಂತರವಾಗಿ ಕೈಗೊಳ್ಳಬೇಕು ಎಂದು ಹೇಳಿದರು.

ಹೈದ್ರಾಬಾದ್ ಕರ್ನಾಟಕ ಪ್ರದೇಶದ ವಿಶೇಷ ಸ್ಥಾನಮಾನಕ್ಕಾಗಿ ಜಾರಿಗೊಂಡ 371(ಜೆ) ತಿದ್ದುಪಡಿ ಜಾರಿಯಿಂದ ಪ್ರತಿ ವರ್ಷ 6000 ಇಂಜಿನಿಯರಿಂಗ್ ಮತ್ತು 750 ಮೆಡಿಕಲ್ ಸೀಟುಗಳು ಈ ಭಾಗದವರಿಗೆ ಉಚಿತವಾಗಿ ಸಿಗುತ್ತಿವೆ. ಇದಲ್ಲದೇ ಈ ಭಾಗದ 22000 ಜನರಿಗೆ ಉದ್ಯೋಗಾವಕಾಶ ಕಲ್ಪಿಸಲಾಗಿದೆ. ಹೈದ್ರಾಬಾದ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಈ ಹಿಂದಿನ ಐದು ವರ್ಷಗಳಲ್ಲಿ ಕೇವಲ 350 ಕೋಟಿ ರೂ. ಅನುದಾನ ಒದಗಿಸಲಾಗಿತ್ತು. ಈಗ 371(ಜೆ) ಜಾರಿಯಿಂದ ಹೆಚ್.ಕೆ.ಆರ್.ಡಿ.ಬಿ.ಗೆ ಈವರೆಗೆ 4500 ಕೋಟಿ ರೂ. ಅನುದಾನ ಒದಗಿಸಿರುವುದು ಒಂದು ಚರಿತ್ರಾರ್ಹ ದಾಖಲೆಯಾಗಿದೆ. ಇದರಿಂದ ಈ ಭಾಗದ ಸಾಮಾಜಿಕ, ಆರ್ಥಿಕ, ಭೌಗೋಳಿಕ ಅಭಿವೃದ್ಧಿಯಾಗಬೇಕು. ಮೂಲಭೂತ ಸೌಕರ್ಯಕ್ಕೆ ಹೆಚ್ಚು ಒತ್ತು ನೀಡಬೇಕು. ಮಂಡಳಿಗೆ 2017-18ನೇ ಸಾಲಿನ ಆಯವ್ಯಯನಲ್ಲಿ ನೀಡಲಾದ 1500 ಕೋಟಿ ರೂ. ಅನುದಾನವನ್ನು ಸಹ ಸದರಿ ವರ್ಷದಲ್ಲಿಯೇ ಖರ್ಚು ಮಾಡಲು ಹಾಗೂ ಮಂಡಳಿಯಿಂದ ಕೈಗೊಳ್ಳಲಾಗುವ ವಿವಿಧ ಕಾಮಗಾರಿಗಳ ಬಗ್ಗೆ ಪ್ರಚಾರ ಕಾರ್ಯ ಕೈಗೊಳ್ಳಲು ಮಂಡಳಿಯ ಅಧ್ಯಕ್ಷರು ಹಾಗೂ ವೈದ್ಯಕೀಯ ಶಿಕ್ಷಣ ಸಚಿವ ಡಾ॥ ಶರಣಪ್ರಕಾಶ ಪಾಟೀಲ ಪ್ರಯತ್ನಿಸಬೇಕು ಎಂದರು.

ಲೋಕಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಮುಖ್ಯ ಅತಿಥಿಯಾಗಿ ಮಾತನಾಡಿ, ಹೇಮರಡ್ಡಿ ಮಲ್ಲಮ್ಮ 14ನೇ ಶತಮಾನದಲ್ಲಿ ಭಾರತೀಯ ಸಮಾಜದಲ್ಲಿ ಹೊಸ ಹೊಸ ವಿಚಾರಗಳನ್ನು ನೀಡಿದವರು. ಬಸವತತ್ವ ಅಧ್ಯಯನ ಸಂಸ್ಥೆಗಳ ಮಾದರಿಯಲ್ಲಿ ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಇಂದು ಪ್ರಾರಂಭಗೊಂಡ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಅಧ್ಯಯನ ಪೀಠವು ಈ ಶಿವಶರಣೆಯ ಆಧ್ಯಾತ್ಮಿಕ, ವೈಚಾರಿಕ ಮತ್ತು ಧಾರ್ಮಿಕ ಕಾರ್ಯ ಸಾಧನೆಗಳ ಅಧ್ಯಯನ ಮತ್ತು ಸಂಶೋಧನೆಗೆ ಆದ್ಯತೆ ನೀಡಬೇಕು. ಇದಕ್ಕಾಗಿ ಈ ಪೀಠಕ್ಕೆ ಪ್ರತ್ಯೇಕ ಕಟ್ಟಡ ಮತ್ತು ಉಪಕರಣಗಳನ್ನು ಒದಗಿಸಬೇಕು. ಹೈದ್ರಾಬಾದ್ ಕರ್ನಾಟಕ ಭಾಗದ ಉನ್ನತಿಗಾಗಿ ಜಾರಿಗೊಂಡ 371(ಜೆ)ಯಿಂದ ಈ ಭಾಗದ ಶೈಕ್ಷಣಿಕ, ಆರ್ಥಿಕ ಮತ್ತು ಉದ್ಯೋಗ ಕ್ಷೇತ್ರದ ಅಭಿವೃದ್ಧಿಗೆ

ಅನುಕೂಲವಾಗಿದೆ. ಈ ಭಾಗದ ಜನರಿಗೆ ಇದೊಂದು ವರದಾನವಾಗಿದ್ದು, ಎಲ್ಲರೂ ಇದರ ಲಾಭ ಪಡೆಯಬೇಕೆಂದರು. ಮುಖ್ಯಮಂತ್ರಿಗಳು 2017–18ನೇ ಸಾಲಿನ ಜನಪರ ಬಜೆಟ್ ನೀಡಿದ್ದು, ನಮ್ಮ ಈ ಭಾಗದ ಎಲ್ಲ ಬೇಡಿಕೆಯಂತೆ ಹೈದ್ರಾಬಾದ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಈ ಬಜೆಟ್ಟಿನಲ್ಲಿ ಒಟ್ಟು 1500 ಕೋಟಿ ರೂ. ಅನುದಾನ ಒದಗಿಸಿರುವುದು ಅಭಿನಂದನಾರ್ಹವಾಗಿದೆ. ಗುಲಬರ್ಗಾ ವಿಶ್ವವಿದ್ಯಾಲಯವನ್ನು ಮಾದರಿ ವಿಶ್ವವಿದ್ಯಾಲಯವನ್ನಾಗಿ ಮಾಡಲು ಸರ್ಕಾರ ವಿಶ್ವವಿದ್ಯಾಲಯಕ್ಕೆ ಹೆಚ್ಚಿನ ಅನುದಾನ ನೀಡಬೇಕು. ಯುಜಿಸಿಯಿಂದಲೂ ಹೆಚ್ಚಿನ ಹಣ ಪಡೆಯಲು ಪ್ರಯತ್ನಿಸಬೇಕು ಎಂದರು.

ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರಡ್ಡಿ ಸಮಾರಂಭದ ಘನ ಉಪಸ್ಥಿತಿವಹಿಸಿ ಮಾತನಾಡಿ, ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಮನುಕುಲದ ಅಭ್ಯುದಯಕ್ಕಾಗಿ ಶರಣತತ್ವ ಅಳವಡಿಸಿಕೊಂಡು ಸಮಾನತೆ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ತಮ್ಮ ಜೀವನವನ್ನು ಮುಡುಪಾಗಿಟ್ಟಿದ್ದರು. ಇಂದು ಪ್ರಾರಂಭಗೊಂಡ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಅಧ್ಯಯನ ಪೀಠದಿಂದ ಅವರ ಜೀವನ ಸಾಧನೆ ಮತ್ತು ವಿಚಾರಧಾರೆಗಳು ಹೊರಹೊಮ್ಮುವಂತಾಗಬೇಕು. ಈ ಪೀಠಕ್ಕೆ ಒಟ್ಟು 5 ಕೋಟಿ ರೂ. ಒದಗಿಸಲಾಗಿದೆ. ರಾಜ್ಯದ ಮುಖ್ಯಮಂತ್ರಿಗಳು 2017–18ನೇ ಸಾಲಿನ 1.87 ಲಕ್ಷ ಕೋಟಿ ರೂ. ಬಜೆಟ್ ಮಂಡಿಸಿದ್ದು, ಇದರಲ್ಲಿ ಪ್ರಾಥಮಿಕ, ಪ್ರೌಢಶಿಕ್ಷಣ ಮತ್ತು ಉನ್ನತ ಶಿಕ್ಷಣಕ್ಕೆ 24000 ಕೋಟಿ ರೂ. ಒದಗಿಸಲಾಗಿದೆ. ವೃತ್ತಿಪರ ಮತ್ತು ಇತರ ಪದವಿ ತರಗತಿಗಳಲ್ಲಿ ಓದುತ್ತಿರುವ 1.50 ಲಕ್ಷ ವಿದ್ಯಾರ್ಥಿಗಳಿಗೆ ಉಚಿತವಾಗಿ ಲ್ಯಾಪ್‌ಟಾಪ್ ಒದಗಿಸಲು ಯೋಜಿಸಲಾಗಿದೆ ಎಂದರು.

ರಾಜ್ಯದ ವೈದ್ಯಕೀಯ ಶಿಕ್ಷಣ, ಹೆಚ್.ಕೆ.ಆರ್.ಡಿ.ಬಿ ಅಧ್ಯಕ್ಷ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಡಾ॥ ಶರಣಪ್ರಕಾಶ್ ಪಾಟೀಲ, ಕಲಬುರಗಿ ಗ್ರಾಮೀಣ ವಿಧಾನಸಭಾ ಸದಸ್ಯ ಜಿ. ರಾಮಕೃಷ್ಣ, ಮುಖ್ಯ ಅತಿಥಿಗಳಾಗಿ, ಗುಲಬರ್ಗಾ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯೆ ಅಕ್ಕಮಹಾದೇವಿ ರವಿರಾಜ್ ಪಾಟೀಲ, ವಿಶ್ವವಿದ್ಯಾಲಯದ ವಿದ್ಯಾವಿಷಯಕ ಪರಿಷತ್ ಸದಸ್ಯ ಡಾ. ರಝಾಕ್ ಉಸ್ತಾದ ಗೌರವಾನ್ವಿತ ಅತಿಥಿಗಳಾಗಿ ಭಾಗವಹಿಸಿದ್ದರು. ಗುಲಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಎಸ್.ಆರ್ ನಿರಂಜನ್ ಅಧ್ಯಕ್ಷತೆವಹಿಸಿದ್ದರು.

ಈ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ ಎನ್. ಧರ್ಮಸಿಂಗ್, ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಧೀಶ ಹಾಗೂ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಮಾಜಿ ಅಧ್ಯಕ್ಷ ಶಿವರಾಜ್ ವಿ. ಪಾಟೀಲ, ಸರ್ಕಾರದ ನಿವೃತ ಮುಖ್ಯ ಕಾರ್ಯದರ್ಶಿ ಬಿ.ಎಸ್. ಪಾಟೀಲ, ಪದ್ಮಶ್ರೀ ಪ್ರಶಸ್ತಿ ಭಾಜನರಾದ ಹುಬ್ಬಳಿಯ ಡಾ. ಆರ್.ಬಿ. ಪಾಟೀಲ, ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಪೀಠದ ವಿಶ್ರಾಂತ ಪ್ರಾಧ್ಯಾಪಕ ಡಾ. ಬಿ.ವ್ಹಿ. ಶಿರೂರ, ಆಳಂದ ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಎ.ವ್ಹಿ ಪಾಟೀಲ್ ಪದವಿ ಮಹಾವಿದ್ಯಾಲಯದ ಅತಿಥಿ ಉಪನ್ಯಾಸಕಿ ಡಾ. ಸುಮಂಗಲಾ ಎನ್. ರೆಡ್ಡಿ ಅವರನ್ನು ಸನ್ಮಾನಿಸಲಾಯಿತು. ಇದಲ್ಲದೇ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ ಮತ್ತು ಗುಲಬರ್ಗಾ ವಿಶ್ವವಿದ್ಯಾಲಯಗಳ ಜಂಟಿ ಶೈಕ್ಷಣಿಕ ಚಟುವಟಿಕೆಗಳ ವಿನಿಮಯ ಯೋಜನೆಯ ಒಪ್ಪಂದ ಕಾರ್ಯಕ್ರಮ ಮುಖ್ಯಮಂತ್ರಿಗಳ ಸಮ್ಮುಖದಲ್ಲಿ ಜರುಗಿತು. ಕೇಂದ್ರೀಯ ವಿಶ್ವವಿದ್ಯಾಲಯದ

ಕುಲಪತಿ ಪ್ರೊ. ಹೆಚ್.ಎಂ. ಮಹೇಶ್ವರಯ್ಯ ಹಾಗೂ ಗುಲಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಎಸ್.ಆರ್.ನಿರಂಜನ್ ಒಪ್ಪಂದಕ್ಕೆ ಸಹಿ ಹಾಕಿದರು. ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ದಯಾನಂದ ಅಗಸರ ವಂದಿಸಿದರು.

## ಕಲಬುರಗಿ ಜಿಲ್ಲೆಯಲ್ಲಿ 4 ಹೊಸ ತಾಲೂಕುಗಳ ಶೀಘ್ರ ರಚನೆ

ಕಲಬುರಗಿ,ಮಾ.18 – ರಾಜ್ಯ ಸರ್ಕಾರವು 2017–18ನೇ ಸಾಲಿನ ಆಯವ್ಯಯದಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಹೊಸ ನಾಲ್ಕು ತಾಲೂಕುಗಳನ್ನು ಘೋಷಿಸಲಾಗಿದ್ದು, ಈ ತಾಲೂಕುಗಳನ್ನು ಶೀಘ್ರದಲ್ಲಿಯೇ ರಚಿಸಿ ಉದ್ಘಾಟಿಸಲಾಗುವುದು ಎಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ಅವರು ಶನಿವಾರ ಚಿತ್ತಾಪುರ ಎ.ಪಿ.ಎಂ.ಸಿ. ಯಾರ್ಡ್ ಸಮೀಪದಲ್ಲಿ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರವರ 125ನೇ ಜನ್ಮ ಶತಮಾನೋತ್ಸವ ಅಂಗವಾಗಿ ಆಯೋಜಿಸಿರುವ ಮಹಾ ಸಮ್ಮೇಳನ ಹಾಗೂ ಸುಮಾರು 80 ಕೋಟಿ ರೂ. ವೆಚ್ಚದ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ರಾಜ್ಯದಾದ್ಯಂತ ಡಾ. ಬಿ.ಆರ್. ಅಂಬೇಡ್ಕರವರ 125ನೇ ಜನ್ಮ ಶತಮಾನೋತ್ಸವವನ್ನು ಸರ್ಕಾರ ಇಡೀ ವರ್ಷ ಆಚರಣೆ ಮಾಡಿದೆ. ಈ ಜನ್ಮ ಶತಮಾನೋತ್ಸವ ಸಮಾರೋಪದ ಅಂಗವಾಗಿ ಜುಲೈ ಮಾಹೆಯಲ್ಲಿ ಅಂತರರಾಷ್ಟ್ರೀಯ ಸಮಾರಂಭ ಹಮ್ಮಿಕೊಳ್ಳಲಾಗುವುದು. ಈ ಕಾರ್ಯಕ್ರಮಕ್ಕೆ ದೇಶ–ವಿದೇಶದ ಅರ್ಥಶಾಸ್ತ್ರಜ್ಞರನ್ನು ಆಹ್ವಾನಿಸಲಾಗುವುದು. ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಕಳೆದ ವರ್ಷ 19543 ಕೋಟಿ ರೂ. ಅನುದಾನ ಒದಗಿಸಿದ್ದರೆ, 2017–18ನೇ ಸಾಲಿನಲ್ಲಿ 27704 ಕೋಟಿ ರೂ. ಅನುದಾನ ಮೀಸಲಿಡಲಾಗಿದೆ. ಇದು ಕಳೆದ ವರ್ಷಕ್ಕಿಂತ ಶೇ. 47ರಷ್ಟು ಹೆಚ್ಚಾಗಿರುವುದು ಒಂದು ಐತಿಹಾಸಿಕ ದಾಖಲೆಯಾಗಿದೆ ಎಂದರು.

ಡಾ. ಬಿ.ಆರ್. ಅಂಬೇಡ್ಕರವರ 125ನೇ ಜನ್ಮ ಶತಮಾನೋತ್ಸವ ಅಂಗವಾಗಿ ರಾಜ್ಯದಲ್ಲಿ ಅಂಬೇಡ್ಕರವರ ಹೆಸರಿನಲ್ಲಿ 125 ವಸತಿ ಶಾಲೆಗಳನ್ನು ಪ್ರಾರಂಭಿಸಲಾಗುವುದು. ಹೋಬಳಿಗೊಂದು ವಸತಿ ಶಾಲೆ ನಿರ್ಮಿಸಲಾಗುವುದು. ರಾಜ್ಯ ಸರ್ಕಾರ ರಾಜ್ಯದಲ್ಲಿರುವ ಎಲ್ಲ ವಿಧಾನಸಭಾ ಕ್ಷೇತ್ರಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿದೆ. ಸಾಮಾಜಿಕ ನ್ಯಾಯ, ಸಮಾನತೆ, ಸರ್ವರಿಗೂ ಸಮಪಾಲು, ಸಮಬಾಳು ಎಂಬ ಸಿದ್ಧಾಂತದ ಮೇಲೆ ಜಾತಿ–ವರ್ಗರಹಿತ ಸಮಾಜ ನಿರ್ಮಾಣದ ಉದ್ದೇಶ ಹೊಂದಲಾಗಿದೆ. ಸರ್ಕಾರವು ಈ ಭಾಗದ ಎಲ್ಲ ಬೇಡಿಕೆಗಳಿಗೆ ಸ್ಪಂದಿಸಿದೆ ಎಂದು ಹೇಳಿದರು.

ಲೋಕಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಪ್ರಸಕ್ತ ಆಯವ್ಯಯದಲ್ಲಿ ರಾಜ್ಯ ಸರ್ಕಾರ ಕೋಲಿ ಸಮಾಜದ ಶ್ರೇಯೋಭಿವೃದ್ಧಿಗಾಗಿ ನಿಜಶರಣ ಅಂಬಿಗರ ಚೌಡಯ್ಯ ನಿಗಮವನ್ನು ಸ್ಥಾಪಿಸುವ ಬಗ್ಗೆ ಘೋಷಿಸಿರುವುದು ಸ್ವಾಗತಾರ್ಹ. ಇದಲ್ಲದೇ ಆಡಳಿತ ವಿಕೇಂದ್ರೀಕರಣದ ಹಿತದೃಷ್ಟಿಯಿಂದ ಸರ್ಕಾರ ರಾಜ್ಯದಲ್ಲಿ 49 ಹೊಸ ತಾಲೂಕುಗಳನ್ನು ರಚಿಸುವ ಬಗ್ಗೆ ಪ್ರಕಟಿಸಿದ್ದು, ಇದರಲ್ಲಿ ನಾಲ್ಕು ತಾಲೂಕುಗಳು ಕಲಬುರಗಿ ಜಿಲ್ಲೆಗೆ ಸೇರಿವೆ. ಈ ಭಾಗದ ದಶಕಗಳಿಂದ ನೆನೆಗುದ್ದಿಗೆ ಬಿದ್ದ ಎಲ್ಲ ಬೇಡಿಕೆಗಳನ್ನು

ಸರ್ಕಾರ ಈಡೇರಿಸಿದೆ. ಇದರಿಂದ ಸಾರ್ವಜನಿಕರ ಜವಾಬ್ದಾರಿ ಹೆಚ್ಚಾಗಿದೆ. ಡಾ. ಬಿ.ಆರ್. ಅಂಬೇಡ್ಕರವರ 125ನೇ ಜನ್ಮ ಶತಮಾನೋತ್ಸವ ಅಂಗವಾಗಿ ಲಂಡನ್ ಸ್ಕೂಲ್ ಆಫ್ ಎಕನಾಮಿಕ್ಸ್ ಮಾದರಿಯಲ್ಲಿ ರಾಜ್ಯ ಸರ್ಕಾರವು 150 ಕೋಟಿ ರೂ. ವೆಚ್ಚದಲ್ಲಿ ಅಂಬೇಡ್ಕರರ ಹೆಸರಿನಲ್ಲಿ ಎಕನಾಮಿಕ್ಸ್ ಕಾಲೇಜು ಪ್ರಾರಂಭಿಸಲಿದೆ ಎಂದರು.

ವೈದ್ಯಕೀಯ ಶಿಕ್ಷಣ ಸಚಿವ ಡಾ॥ ಶರಣಪ್ರಕಾಶ ಪಾಟೀಲ, ಪ್ರವಾಸೋದ್ಯಮ ಮತ್ತು ಐಟಿ-ಬಿಟಿ ಸಚಿವ ಪ್ರಿಯಾಂಕ ಖರ್ಗೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಂಸದೀಯ ಕಾರ್ಯದರ್ಶಿ ಡಾ॥ ಉಮೇಶ ಜಾಧವ, ಶಾಸಕರಾದ ಡಾ॥ ಅಜಯಸಿಂಗ, ಜಿ. ರಾಮಕೃಷ್ಣ, ಕಾಡಾ ಅಧ್ಯಕ್ಷ ಮಹಾಂತಪ್ಪ ಸಂಗಾವಿ, ಕರ್ನಾಟಕ ತೊಗರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಭಾಗನಗೌಡ ಸಂಕನೂರ, ಸಾರಂಗಧರ ದೇಶಿಕೇಂದ್ರ ಮಹಾಸ್ವಾಮಿಗಳು, ಮುಖಂಡರಾದ ನಾಗರಡ್ಡಿ ಪಾಟೀಲ ಕರದಾಳ, ಮಾಪಣ್ಣ ಗಂಜಗೇರಿ, ಡಾ. ಬಿ.ಆರ್. ಅಂಬೇಡ್ಕರವರ 125ನೇ ಜಯಂತ್ಯೋತ್ಸವ ಸಮಿತಿ ಅಧ್ಯಕ್ಷರು, ಪದಾಧಿಕಾರಿಗಳು, ಸದಸ್ಯರು ಮತ್ತಿತರರು ಸಮಾರಂಭದಲ್ಲಿ ಪಾಲ್ಗೊಂಡಿದ್ದರು. ಚಿತ್ತಾಪುರ ತಾಲೂಕಿನ ಕಾಳಗಿ ಮತ್ತು ಶಹಾಬಾದಗಳನ್ನು ಹೊಸ ತಾಲೂಕುಗಳಾಗಿ ಘೋಷಿಸಿದ್ದಕ್ಕಾಗಿ ಈ ಗ್ರಾಮಗಳ ಜನರು ಮುಖ್ಯಮಂತ್ರಿಗಳನ್ನು ಸನ್ಮಾನಿಸಿದರು.

*****